# ಇರಾನ್ ಅಧ್ಯಕ್ಷ ಮತ್ತು ವಿದೇಶಾಂಗ ಸಚಿವರ ದುರಂತ ನಿಧನಕ್ಕೆ ಭಾರತ ಒಂದು ದಿನದ ರಾಷ್ಟ್ರೀಯ ಶೋಕಾಚರಣೆ ಘೋಷಿಸಿದೆ

ಮೇ 20, 2024

ಭಾರತ ಸರ್ಕಾರ ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್‌ನ ಅಧ್ಯಕ್ಷರಾದ ಗೌರವಾನ್ವಿತ ಡಾ. ಸೆಯ್ಯದ್ ಇಬ್ರಾಹಿಂ ರೈಸಿ ಮತ್ತು ಇಸ್ಲಾಮಿಕ್ ರಿಪಬ್ಲಿಕ್ ಆಫ್ ಇರಾನ್‌ನ ವಿದೇಶಾಂಗ ಸಚಿವ ಗೌರವಾನ್ವಿತ ಹುಸೇನ್ ಅಮೀರ್-ಅಬ್ದುಲ್ಲಾಹಿಯಾನ್ ಅವರು ಹೆಲಿಕಾಪ್ಟರ್ ಅಪಘಾತದಲ್ಲಿ ದುರಂತವಾಗಿ ನಿಧನರಾಗಿರುವುದಕ್ಕಾಗಿ ಗೌರವ ಸೂಚಕವಾಗಿ ನಾಳೆ, 21 ಮೇ 2024 ರಂದು ಒಂದು ದಿನದ ರಾಷ್ಟ್ರೀಯ ಶೋಕಾಚರಣೆಯನ್ನು ಘೋಷಿಸಿದೆ. ರಾಷ್ಟ್ರೀಯ ಧ್ವಜವನ್ನು ನಿಯಮಿತವಾಗಿ ಹಾರಿಸುವ ಎಲ್ಲಾ ಕಟ್ಟಡಗಳ ಮೇಲೆ ಶೋಕಾಚರಣೆಯ ದಿನದಂದು ರಾಷ್ಟ್ರಧ್ವಜವನ್ನು ಅರ್ಧಮಟ್ಟಕ್ಕೆ ಹಾರಿಸಲಾಗುತ್ತದೆ ಮತ್ತು ದಿನದಂದು ಯಾವುದೇ ಅಧಿಕೃತ ಮನರಂಜನೆ ಇರುವುದಿಲ್ಲ.

ಭಾರತದ ಪ್ರಧಾನಮಂತ್ರಿ ಶ್ರೀ ನರೇಂದ್ರ ಮೋದಿ ಮತ್ತು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು ಗೌರವಾನ್ವಿತ ಡಾ. ಸೆಯ್ಯದ್ ಇಬ್ರಾಹಿಂ ರೈಸಿ, ಮತ್ತು ಗೌರವಾನ್ವಿತ ಹುಸೇನ್ ಅಮೀರ್-ಅಬ್ದುಲ್ಲಾಹಿಯಾನ್ ಅವರ ನಿಧನಕ್ಕೆ ಸಂತಾಪ ಸೂಚಿಸಿದ್ದಾರೆ. ತಮ್ಮ ಸಂದೇಶಗಳಲ್ಲಿ, ಭಾರತ-ಇರಾನ್ ಸಂಬಂಧಗಳನ್ನು ಬಲಪಡಿಸುವಲ್ಲಿ ಉಭಯ ನಾಯಕರು ವಹಿಸಿದ ಪ್ರಮುಖ ಪಾತ್ರವನ್ನು ಅವರು ಸ್ಮರಿಸಿದರು.

**ನವದೆಹಲಿ**
**ಮೇ 20, 2024**